# ACTION ON ANNONYMUS COMPLAINTS

| Sl.No | Date | Type | File No | Subject |
|---|---|---|---|---|
| 1. | 03.10.2019 | Circular | ಸಿಆಸುಇ 21 ಸೇಇವಿ 2019 | ಸರ್ಕಾರಿ ಅಧಿಕಾರಿ ನೌಕರರ ವಿರುದ್ಧ ಅನಾಮಧೇಯ (Anonymous) ದೂರಗಳ ಬಗ್ಗೆ ಕ್ರಮ. |
| 2. | 05.03.2021 | Circular | ಸಿಆಸುಇ 15 ಸೇಇವಿ 2021 | ಸರ್ಕಾರಿ ಅಧಿಕಾರಿ ನೌಕರರ ವಿರುದ್ಧ ಅನಾಮಧೇಯ (Anonymous) ದೂರಗಳ ಬಗ್ಗೆ ಕ್ರಮ. |

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 21 ಸೇಇವಿ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ
ಬೆಂಗಳೂರು, ದಿನಾಂಕ: 03.10.2019.

**ಸುತ್ತೋಲೆ**

ವಿಷಯ: ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧದ ಅನಾಮಧೇಯ (anonymous) ದೂರುಗಳ ಬಗ್ಗೆ ಕ್ರಮ.

ಉಲ್ಲೇಖ:
1. ಸುತ್ತೋಲೆ ಸಂಖ್ಯೆ: ಜಿಎಡಿ 113 ಒಒಎಂ 62, ದಿನಾಂಕ: 26.01.1962.
2. ಭಾರತ ಸರ್ಕಾರದ ಡಿ.ಓ.ಪಿ.ಟಿ ಅಧಿಕೃತ ಜ್ಞಾಪನ ಸಂಖ್ಯೆ: 104/76/2011-AVD.1, ದಿನಾಂಕ: 18.10.2013

****

1. ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ಸ್ವೀಕೃತವಾಗುವ ಅನಾಮಧೇಯ ದೂರುಗಳ ಬಗ್ಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಉಲ್ಲೇಖಿತ ಸುತ್ತೋಲೆಯಲ್ಲಿ ಕೆಲವು ಸೂಚನೆಗಳನ್ನು ನೀಡಲಾಗಿದೆ. ಇಂತಹ ದೂರುಗಳು ಕೆಲವು ಸಂದರ್ಭಗಳಲ್ಲಿ ವೈಯುಕ್ತಿಕ ದ್ವೇಷ, ಅಸೂಯೆ ಅಥವಾ ಪೂರ್ವಗ್ರಹ ಪೀಡಿತವಾಗಿರುತ್ತದೆ. ಅಲ್ಲದೇ, ದೂರುಗಳಿಗೆ ಪೂರಕವಾದ ಮಾಹಿತಿ/ದಾಖಲೆಗಳನ್ನು ಸಾಮಾನ್ಯವಾಗಿ ಲಭ್ಯಪಡಿಸಿರುವುದಿಲ್ಲ.ಇಂತಹ ದೂರುಗಳಿಂದಾಗಿ ಸರ್ಕಾರಿ ಅಧಿಕಾರಿ/ನೌಕರರ ದೈನಂದಿನ ಕೆಲಸ ಕಾರ್ಯಗಳಲ್ಲಿ ಹಸ್ತಕ್ಷೇಪ ಉಂಟಾಗುವುದಲ್ಲದೇ ದಕ್ಷ ಹಾಗೂ ಪ್ರಾಮಾಣಿಕ ನೌಕರರ ವಿಶ್ವಾಸರ್ಹತೆಗೆ, ಧಕ್ಕೆ ಉಂಟಾಗುತ್ತದೆ ಹಾಗೂ ಅವರು ಮುಕ್ತ ಮತ್ತು ನಿರ್ಭೀತರಾಗಿ ಕೆಲಸ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ.

2. ಮಾನ್ಯ ಮುಖ್ಯ ಮಂತ್ರಿಯವರು ದಿನಾಂಕ: 04.08.2019ರ ಟಿಪ್ಪಣಿಯಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘವು ಈ ಸಂಬಂಧ ನೀಡಿರುವ ಮನವಿಯನ್ನು ಪರಿಗಣಿಸಿ, ಕೇಂದ್ರ ಸರ್ಕಾರದ ಮಾದರಿಯಂತೆಯೇ ರಾಜ್ಯದಲ್ಲಿ ಸರ್ಕಾರಿ ನೌಕರರ ವಿರುದ್ಧ ಅನಾಮಧೇಯ ದೂರು/ಪತ್ರಗಳ ಆಧಾರದ ಮೇಲೆ ತನಿಖೆಗೆ ಒಳಪಡಿಸದೆ, ಪೂರ್ಣ ವಿಳಾಸ ಸಹಿತವಿರುವ ದೂರುಗಳನ್ನು ಮಾತ್ರ ತನಿಖೆಗೆ ಪರಿಗಣಿಸಲು ಆದೇಶ ಹೊರಡಿಸುವಂತೆ ಸೂಚಿಸಿರುತ್ತಾರೆ.
3. ಮೇಲ್ಕಾಣಿಸಿದ ಅಂಶಗಳ ಹಾಗೂ ಭಾರತ ಸರ್ಕಾರದ ಉಲ್ಲೇಖ-2ರ ಅಧಿಕೃತ ಜ್ಞಾಪನದ ಹಿನ್ನೆಲೆಯಲ್ಲಿ ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ಸ್ವೀಕೃತವಾಗುವ ಅನಾಮಧೇಯ ಅರ್ಜಿಗಳ ಆಧಾರದ ಮೇಲೆ ಪ್ರಕರಣವನ್ನು ತನಿಖೆಗೆ/ವಿಚಾರಣೆಗೆ ಒಳಪಡಿಸದೇ ಅಂತಹ ದೂರು ಅರ್ಜಿಗಳನ್ನು ಕಡತಗೊಳಿಸಬೇಕೆಂದು ಸೂಚಿಸಿದೆ.

4. ಪೂರ್ಣ ವಿಳಾಸ ಸಹಿತವಿರುವ ದೂರುಗಳನ್ನು ಮಾತ್ರ ತನಿಖೆಗೆ/ವಿಚಾರಣೆ ಪರಿಗಣಿಸಲು ಸಚಿವಾಲಯದ ಎಲ್ಲಾ ಕಾರ್ಯದರ್ಶಿಗಳಿಗೆ ಹಾಗೂ ಇಲಾಖಾ ಮುಖ್ಯಸ್ಥರಿಗೆ ಸೂಚಿಸಲಾಗಿದೆ. ಈ ಅಂಶವನ್ನು ಸಂಬಂಧಪಟ್ಟ ಇಲಾಖೆಗಳು ತಮ್ಮ ಅಧೀನ ಕಛೇರಿಗಳಿಗೆ ತಿಳಿಸಲು ಅಗತ್ಯ ಕ್ರಮವಹಿಸುವಂತೆ ಸೂಚಿಸಲಾಗಿದೆ.

(ತ.ಮ.ವಿಜಯ ಭಾಸ್ಕರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | *ಬೆಂಗಳೂರು*, ಸೋಮವಾರ, ೦೮, ಮಾರ್ಚ್, ೨೦೨೧ (ಫಾಲ್ಗುಣ, ೧೭, *ಶಕವರ್ಷ*, ೧೯೪೨)<br>**BENGALURU, MONDAY, 08, MARCH, 2021 (PHALGUNA , 17, SHAKAVARSHA, 1942)** | ನಂ. ೨೩೧<br>**No. 231** |
|---|---|---|


**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 15 ಸೇಇವಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ:05.03.2021.

**ಸುತ್ತೋಲೆ**

**ವಿಷಯ: ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧದ ಅನಾಮಧೇಯ (anonymous) ದೂರುಗಳ ಬಗ್ಗೆ.**

ಉಲ್ಲೇಖ: 1. ಸುತ್ತೋಲೆ ಸಂಖ್ಯೆ: ಸಿಆಸುಇ 21 ಸೇಇವಿ 2019, ದಿನಾಂಕ:03.10.2019.
2. ಮಾನ್ಯ ಮುಖ್ಯಮಂತ್ರಿಯವರ ಟಿಪ್ಪಣಿ ಸಂಖ್ಯೆ; ಇ - 2306163/2021, ದಿನಾಂಕ:20.02.2021

*****

ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ಸ್ವೀಕೃತವಾಗುವ ದೂರುಗಳು ಕೆಲವು ಸಂದರ್ಭಗಳಲ್ಲಿ ವೈಯಕ್ತಿಕ ದ್ವೇಷ, ಅಸೂಯೆ ಅಥವಾ ಪೂರ್ವಗ್ರಹ ಪೀಡಿತವಾಗಿದ್ದು, ಪೂರಕ ಮಾಹಿತಿ/ದಾಖಲೆಗಳನ್ನು ಲಭ್ಯಪಡಿಸದಿರುವುದರಿಂದ ಹಾಗೂ ಇಂತಹ ದೂರುಗಳಿಂದಾಗಿ ಸರ್ಕಾರಿ ಅಧಿಕಾರಿ/ನೌಕರರು ದೈನಂದಿನ ಕೆಲಸ ಕಾರ್ಯಗಳನ್ನು ಮುಕ್ತ ಹಾಗೂ ನಿರ್ಭೀತರಾಗಿ ಕೆಲಸ ನಿರ್ವಹಿಸಲು ತೊಂದರೆಯಾಗುತ್ತಿರುವುದನ್ನು ಗಮನಿಸಿ, ಇಂತಹ ಅನಾಮಧೇಯ ಅರ್ಜಿಗಳನ್ನು ತನಿಖೆಗೆ/ವಿಚಾರಣೆಗೆ ಒಳಪಡಿಸದೇ ಕಡತಗೊಳಿಸುವಂತೆ ಹಾಗೂ ಪೂರ್ಣ ವಿಳಾಸ ಸಹಿತವಿರುವ ದೂರುಗಳನ್ನು ಮಾತ್ರ ತನಿಖೆಗೆ/ವಿಚಾರಣೆಗೆ ಪರಿಗಣಿಸುವಂತೆ ಉಲ್ಲೇಖ (1) ರ ಸುತ್ತೋಲೆಯಲ್ಲಿ ಸೂಚನೆಗಳನ್ನು ನೀಡಲಾಗಿದೆ.

ಮೇಲ್ಕಂಡ ಸುತ್ತೋಲೆಯಲ್ಲಿನ ಸೂಚನೆಯನ್ನು ದುರುಪಯೋಗಪಡಿಸಿಕೊಂಡು ಅನೇಕರು ನಕಲಿ ಹೆಸರು ಮತ್ತು ನಕಲಿ ವಿಳಾಸವನ್ನು ಬಳಸಿಕೊಂಡು ರಾಜ್ಯ ಸರ್ಕಾರಿ ಅಧಿಕಾರಿ/ನೌಕರರ ವಿರುದ್ಧ ದೂರುಗಳನ್ನು ನೀಡಿ ನೌಕರರನ್ನು ಅನಗತ್ಯವಾಗಿ ತನಿಖೆಗೆ ಒಳಪಡಿಸುವಂತೆ ಮಾಡುತ್ತಿರುವುದನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘವು ಮಾನ್ಯ ಮುಖ್ಯಮಂತ್ರಿಯವರ ಗಮನಕ್ಕೆ ತಂದಿರುತ್ತದೆ. ಇಂತಹ ಪ್ರಸಂಗಗಳನ್ನು ತಡೆಹಿಡಿಯಲು ಅಗತ್ಯ ಸೂಚನೆಗಳನ್ನು ಹೊರಡಿಸುವಂತೆ ಮಾನ್ಯ ಮುಖ್ಯಮಂತ್ರಿಯವರು ಉಲ್ಲೇಖ (2)ರ ಟಿಪ್ಪಣಿಯಲ್ಲಿ ಆದೇಶಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಪೂರ್ಣ ವಿಳಾಸ ಸಹಿತವಿರುವ ದೂರುಗಳು ಸ್ವೀಕೃತವಾದಾಗ, ದೂರು ನೀಡಿರುವ ವ್ಯಕ್ತಿಯ ಹೆಸರು ಮತ್ತು ವಿಳಾಸವನ್ನು ಖಚಿತಪಡಿಸಿಕೊಂಡು ಅರ್ಜಿದಾರ/ದೂರುದಾರ ಅಗತ್ಯ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



ಪೂರಕ ದಾಖಲೆಗಳನ್ನು ಒದಗಿಸಿದ ನಂತರ ದೂರುದಾರರ ಆರೋಪವು ಮೇಲ್ನೋಟಕ್ಕೆ ಕಂಡುಬಂದಲ್ಲಿ ಅಂತಹ ದೂರು ಅರ್ಜಿಗಳಿಗೆ ಸಂಬಂಧಿಸಿದಂತೆ ಮಾತ್ರ ಪ್ರಾಥಮಿಕ ತನಿಖೆಗೆ/ವಿಚಾರಣೆಗೆ ಪರಿಗಣಿಸಲು ಆದೇಶಿಸುವಂತೆ ಸೂಚಿಸಲಾಗಿದೆ.

ಈ ಸೂಚನೆಗಳನ್ನು ಸಚಿವಾಲಯದ ಎಲ್ಲಾ ಇಲಾಖಾ ಕಾರ್ಯದರ್ಶಿಗಳು ಹಾಗೂ ಇಲಾಖಾ ಮುಖ್ಯಸ್ಥರು ತಮ್ಮ ವ್ಯಾಪ್ತಿಯಲ್ಲಿ ಒಳಪಡುವ ಅಧೀನ ಕಛೇರಿಗಳಿಗೆ ತಿಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.

**(ಪಿ. ರವಿಕುಮಾರ್)**
ಸರ್ಕಾರದ ಮುಖ್ಯ ಕಾರ್ಯದರ್ಶಿ.

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE Digitally signed by SUNIL GARDE
Date: 2021.03.09 17:15:02 +05'30'